<u>ದಿನಾಂಕಃ 10.02.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಪಾಟೀ ಸವಾಲುಃ ವಾದಿ ಪರ ಶ್ರೀ ಎಸ್.ಜೆ ವಕೀಲರಿಂದಃ</u>

ಮೃತ 1 ನೇ ಪ್ರತಿವಾದಿ ನನ್ನ ತಂದೆ. 1 ನೇ ಪ್ರತಿವಾದಿಯ ಚಿಕ್ಕಪ್ಪನ ಹೆಸರು ಚಿಕ್ಕಮಾದಯ್ಯ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯ ಚಿಕ್ಕಪ್ಪ ಚಿಕ್ಕಮಾದಯ್ಯರವರಿಗೆ ಮಕ್ಕಳು ಇರಲಿಲ್ಲ ಎಂದರೆ ಸರಿಯಲ್ಲ. ಸದರಿ ಚಿಕ್ಕಮಾದಯ್ಯರವರು ನನ್ನ ಚಿಕ್ಕಪ್ಪ ಎಂದು ಮತ್ತು ಸದರಿಯವರಿಗೆ ಮಕ್ಕಳು ಇದ್ದರು ಎಂಬ ಬಗ್ಗೆ ದಾಖಲಾತಿಗಳು ಇರುವುದಿಲ್ಲ. ನನ್ನ ತಂದೆ 1 ನೇ ಪ್ರತಿವಾದಿಯು ಹೆಬ್ಬೆಟ್ಟು ಗುರುತು ಹಾಕುತ್ತಿದ್ದರು ಎಂದರೆ ಸರಿ. ನಾನು ಆಂಗ್ಲ ಭಾಷೆಯಲ್ಲಿ ಸಹಿ ಮಾಡುತ್ತೇನೆ ಎಂದರೆ ಸಾಕ್ಷಿದಾರರು ಕನ್ನಡ ಮತ್ತು ಆಂಗ್ಲ ಎರಡು ಭಾಷೆಗಳಲ್ಲಿ ಸಹಿ ಮಾಡುತ್ತೇನೆ ಎಂದು ನುಡಿಯುತ್ತಾರೆ.

ನನ್ನ ತಂದೆ 1 ನೇ ಪ್ರತಿವಾದಿಯು ಈ ದಾವೆಯ ವಾದಿಯ ವಿರುದ್ಧ ಅಸಲು ದಾವಾ ಸಂ.318/2012 ರಂತೆ ದಾವೆ ಸಲ್ಲಿಸಿದ್ದರು ಎಂದರೆ ಸರಿ. ಸದರಿ ಅಸಲು ದಾವಾ ಸಂ.318/2012 ರಲ್ಲಿ ವಾದಿ ಸಿದ್ದಮರಿಗೌಡರವರು ಒಂದು ಕ್ರಯಪತ್ರವನ್ನು ಹಾಜರು ಮಾಡಿದ್ದರು ಎಂದರೆ ಸರಿ. ಸದರಿ ದಾವೆಯಲ್ಲಿ ಸಿದ್ದಮರಿಗೌಡರವರು ಸಾಕ್ಷಿದಾರರನ್ನು ವಿಚಾರಣೆ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಅಸಲು ದಾವಾ ಸಂ.318/2012 ರ ದಾವೆಯು ವಜಾಗೊಂಡಿದೆ ಎಂದರೆ ಸರಿ. ಸದರಿ ಅಸಲು ದಾವಾ ಸಂ.318/2012 ರ ತೀರ್ಪಿನ ಅಂಶಗಳನ್ನು ಮತ್ತು ದಾಖಲಾತಿಗಳನ್ನು ಓದಿಸಿ ತಿಳಿದುಕೊಂಡಿರುತ್ತೇನೆ. ಸದರಿ ಅಸಲು ದಾವಾ ಸಂ.318/2012 ರಲ್ಲಿನ ದಾಖಲಾತಿಗಳನ್ನು ನಾನು ಓದಿಸಿ ತಿಳಿದುಕೊಂಡಿರುವುದಿಲ್ಲ.

ಸಾಮಾನ್ಯವಾಗಿ ನೋಂದಾಯಿತ ಭೋಗ್ಯ ಮಾಡಿದ್ದಾಗ ಭೋಗ್ಯದಾರರ ಹೆಸರು ಪಹಣಿ ಪತ್ರಿಕೆಗಳಲ್ಲಿ ನಮೂದಾಗುತ್ತದೆ ಎಂದರೆ ಸರಿ. ದಾವಾ ಅನುಸೂಚಿ ಸ್ವತ್ತಿಗೆ ಸಂಬಂಧಿಸಿದಂತೆ ಪಹಣಿ ಪತ್ರಿಕೆಗಳನ್ನು ನಾನು ನೋಡಿರುತ್ತೇನೆ. ದಾವಾ ಅನುಸೂಚಿ ಸ್ವತ್ತನ್ನು ಭೋಗ್ಯ ಮಾಡಿಕೊಂಡಿದ್ದಾರೆ ಎಂದು

ಹೇಳಲಾದ 5 ನೇ ಪ್ರತಿವಾದಿಗೆ 2 ಎಕರೆ ಸ್ವಂತ ಜಮೀನು ಇದೆ ಎಂದರೆ ಸರಿ. ಸದರಿ 5 ನೇ ಪ್ರತಿವಾದಿಯ ಹೆಸರಿನಲ್ಲಿ 2 ಎಕರೆ ಮಾತ್ರ ಪಹಣಿ ಪತ್ರಿಕೆಗಳಲ್ಲಿ ನಮೂದಾಗಿದೆ ಎಂದರೆ ಸರಿ. ನಾನು ದಾವಾ ಅನುಸೂಚಿ ಸ್ವತ್ತನ್ನು 5 ನೇ ಪ್ರತಿವಾದಿಗೆ ಬೋಗ್ಯ ಮಾಡಿ, ಸದರಿ ಆಸ್ತಿಯನ್ನು ಸಾಗುವಳಿ ಮಾಡಲು ಮಾತ್ರ 5 ನೇ ಪ್ರತಿವಾದಿಗೆ ನೀಡಿದ್ದೆನು. ನಾನು ದಾವಾ ಅನುಸೂಚಿ ಸ್ವತ್ತನ್ನು 5 ನೇ ಪ್ರತಿವಾದಿಗೆ ಬೋಗ್ಯ ಮಾಡಿ, ಹಣವನ್ನು ಪಡೆದುಕೊಂಡು ಸದರಿ ಹಣಕ್ಕೆ ಬಡ್ಡಿ ಪಾವತಿಸುತ್ತಿದ್ದೆನು ಎಂದರೆ ಸರಿಯಲ್ಲ. ದಾವಾ ಅನುಸೂಚಿ ಸ್ವತ್ತು ಎಂದಿಗೂ 5 ನೇ ಪ್ರತಿವಾದಿಯ ಹೆಸರಿನಲ್ಲಿ ಪಹಣಿ ಪತ್ರಿಕೆಗಳು ಬರುತ್ತಿರಲಿಲ್ಲ. ದಾವಾ ಅನುಸೂಚಿ ಸ್ವತ್ತು 5 ನೇ ಪ್ರತಿವಾದಿಯ ಸ್ವಾಧೀನತೆಯಲ್ಲಿ ಇಲ್ಲದೇ ಇದ್ದುದ್ದರಿಂದ 5 ನೇ ಪ್ರತಿವಾದಿಯ ಹೆಸರು ಪಹಣಿ ಪತ್ರಿಕೆಗಳಲ್ಲಿ ಬರುತ್ತಿರಲಿಲ್ಲ ಎಂದರೆ ಸರಿಯಲ್ಲ. ದಾವಾ ಅನುಸೂಚಿ ಸ್ವತ್ತು 5 ನೇ ಪ್ರತಿವಾದಿಯ ಸ್ವಾಧೀನತೆಯಲ್ಲಿ ಇತ್ತು ಎಂದು ತೋರಿಸಲು ಯಾವುದೇ ದಾಖಲಾತಿಗಳು ಇರುವುದಿಲ್ಲ.

1 ರಿಂದ 4 ನೇ ಪ್ರತಿವಾದಿಗಳು ಎಲ್ಲರೂ ಸೇರಿ ದಾವಾ ಅನುಸೂಚಿ ಸ್ವತ್ತನ್ನು ವಾದಿಗೆ ಮಾರಾಟ ಮಾಡಿ ರೂ.8,000/- ಹಣವನ್ನು ಪಡೆದುಕೊಂಡು ನೋಂದಾಯಿತವಲ್ಲದ ದಿನಾಂಕ 18.01.1995 ರ ಕ್ರಯಪತ್ರವನ್ನು ಬರೆದುಕೊಟ್ಟಿದ್ದೆವು ಎಂದರೆ ಸರಿಯಲ್ಲ. ಸದರಿ 1995 ರಲ್ಲಿ ತುಂಡು ಭೂಮಿಯು ನೋಂದಣಿಯಾಗದ ಕಾರಣ ನಾವುಗಳು ನೋಂದಾಯಿತವಲ್ಲದ ಕ್ರಯಪತ್ರವನ್ನು ಬರೆದುಕೊಟ್ಟಿದ್ದೆವು ಎಂದರೆ ಸರಿಯಲ್ಲ. ದಾವಾ ಅನುಸೂಚಿ ಸ್ವತ್ತು 1995 ರಿಂದ ಇಲ್ಲಿಯವರೆಗೂ ವಾದಿಯ ಸ್ವಾದೀನತೆಯಲ್ಲಿದೆ ಎಂದರೆ ಸರಿಯಲ್ಲ. ನಿಪಿ-1 ರ ಪತ್ರವು ನೋಂದಣಿಯಾಗದ ಕಾರಣ ವಾದಿಯ ಹೆಸರಿಗೆ ಖಾತೆಯಾಗಿಲ್ಲ ಎಂದರೆ ಸರಿಯಲ್ಲ. 2 ಮತ್ತು 4 ನೇ ಪ್ರತಿವಾದಿಗಳು ನನ್ನ ಸಹೋದರರು. ಸದರಿಯವರು ಕನ್ನಡದಲ್ಲಿ ಸಹಿ ಮಾಡುತ್ತಾರೆ. ನಾನು ಮತ್ತು 1, 2 ಮತ್ತು 4 ನೇ ಪ್ರತಿವಾದಿಗಳು ದಾವಾ ಅನುಸೂಚಿ ಸ್ವತ್ತನ್ನು ವಾದಿಗೆ ಮಾರಾಟ ಮಾಡಿ, ಕ್ರಯಪತ್ರವನ್ನು ಬರೆದುಕೊಟ್ಟಿದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇವೆ ಎಂದರೆ ಸರಿಯಲ್ಲ. 1995 ರಿಂದ

ಈ ದಾವೆ ಸಲ್ಲಿಸುವವರೆಗೂ ನಾವುಗಳು ದಾವಾ ಅನುಸೂಚಿ ಸ್ವತ್ತಿಗೆ ಯಾವುದೇ ಕಂದಾಯ ಪಾವತಿಸಿಲ್ಲ ಎಂದರೆ ಸರಿಯಲ್ಲ. ನಾನು ಹೇಳಿದಂತೆ ಯಾವುದೇ ಕಂದಾಯ ಪಾವತಿಸಿಲ್ಲ ಎಂದರೆ ಸರಿಯಲ್ಲ. 5 ನೇ ಪ್ರತಿವಾದಿಯು ಸಹ ದಾವಾ ಅನುಸೂಚಿ ಸ್ವತ್ತನ್ನು ಬೋಗ್ಯಕ್ಕೆ ಪಡೆದುಕೊಂಡ ನಂತರ ಕಂದಾಯ ಪಾವತಿಸಿರುತ್ತಾರೆ. ಸದರಿ ಕಂದಾಯ ಪಾವತಿಸಿದ ದಾಖಲೆಗಳನ್ನು ನಾನು ನೋಡಿರುವುದಿಲ್ಲ. ನಾನು ಹೇಳಿದಂತೆ ನಾವಾಗಲೀ ಅಥವಾ ಬೋಗ್ಯದಾರರಾದ 5 ನೇ ಪ್ರತಿವಾದಿಯಾಗಲೀ ಯಾವುದೇ ಕಂದಾಯ ಪಾವತಿಸಿಲ್ಲ ಎಂದರೆ ಸರಿಯಲ್ಲ. ನಿಪಿ–1ರ ನೋಂದಾಯಿತವಲ್ಲದ ಕ್ರಯಪತ್ರದ ಆಧಾರದ ಮೇರೆಗೆ ವಾದಿಯು ದಾವಾ ಅನುಸೂಚಿ ಸ್ವತ್ತಿನಲ್ಲಿ ಮಾಲೀಕರಾಗಿ ಸ್ವಾಧೀನತೆ ಹೊಂದಿದ್ದಾರೆ ಎಂದರೆ ಸರಿಯಲ್ಲ. ವಾದಿಯ ಸ್ವಾಧೀನತೆಯಲ್ಲಿರುವ ದಾವಾ ಅನುಸೂಚಿ ಸ್ವತ್ತನ್ನು ಲಪಟಾಯಿಸುವ ಉದ್ದೇಶದಿಂದ ಸುಳ್ಳು ಪ್ರತಿವಾದಪತ್ರ ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ಇತರೆ ಪ್ರತಿವಾದಿಗಳು ಎಂದಿಗೂ ದಾವಾ ಅನುಸೂಚಿ ಸ್ವತ್ತಿನಲ್ಲಿ ಸ್ವಾಧೀನತೆ ಹೊಂದಿಲ್ಲ ಮತ್ತು ನಮಗೆ ದಾವಾ ಅನುಸೂಚಿ ಸ್ವತ್ತಿನಲ್ಲಿ ಯಾವುದೇ ಹಕ್ಕು, ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

**ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ**
**ನ್ಯಾಯಾಧೀಶರು, ತಿ.ನರಸಿಪುರ.**